# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **764** |
| ಉತ್ತರಿಸಬೇಕಾದ ದಿನಾಂಕ | : | 22.02.2023 |
| ಉತ್ತರಿಸಬೇಕಾದ ಸಚಿವರು | : | ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ಔರಾದ ತಾಲ್ಲೂಕಿನಲ್ಲಿ ಸರ್ಕಾರದಿಂದ ಮಂಜೂರಾದ 2 ಎಕರೆ ಜಮೀನಿನಲ್ಲಿ (ಸರ್ವೇ ನಂ.183) ಅಲೆಮಾರಿ/ಅರೆ ಅಲೆಮಾರಿ ಜನಾಂಗಕ್ಕೆ ವಸತಿ ನಿವೇಶನ ಮಂಜೂರು ಮಾಡುವಂತೆ ಕೋರಿದ್ದರೂ ಇಲ್ಲಿಯವರೆಗೆ ನಿವೇಶನಗಳನ್ನು ಮಂಜೂರು ಮಾಡದಿರುವುದಕ್ಕೆ ಕಾರಣಗಳೇನು; (ವಿವರ ನೀಡುವುದು) | ಬೀದರ್ ಜಿಲ್ಲೆಯ ಔರಾದ ತಾಲ್ಲೂಕಿನ ಸರ್ವೆ ನಂ.183 ರಲ್ಲಿ ಸರ್ಕಾರದಿಂದ ಮಂಜೂರಾದ 2 ಎಕರೆ ಜಮೀನಿನಲ್ಲಿ ಅಲೆಮಾರಿ/ಅರೆ ಅಲೆಮಾರಿ ಜನಾಂಗಕ್ಕೆ ವಸತಿ ನಿವೇಶನ ಮಂಜೂರು ಮಾಡಲು ಸ್ಥಳೀಯ ಜನರ ಆಕ್ಷೇಪಣೆ ಇರುವುದರಿಂದ ಜಿಲ್ಲಾಡಳಿತ ಬದಲಿ ವ್ಯವಸ್ಥೆ ಮಾಡಿ ಸರ್ವೆ ನಂ. 205 ರಲ್ಲಿ 2 ಎಕರೆ ಜಮೀನನ್ನು ಮಂಜೂರು ಮಾಡಲಾಗಿರುತ್ತದೆ. ಬಡಾವಣೆ ರಚನೆಗೆ ಕ್ರಮವಹಿಸಲಾಗುವುದು. |
| ಆ) | ಕಳೆದ ಹಲವು ತಿಂಗಳುಗಳ ಹಿಂದೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ರಾಜೀವ್ ಗಾಂಧಿ ಹೌಸಿಂಗ್ ನಿಗಮಕ್ಕೆ ಫಲಾನುಭವಿಗಳ ಆಯ್ಕೆ ಪಟ್ಟಿಯನ್ನು ಮಂಜೂರು ಮಾಡಲು ಕಳುಹಿಸಿದ್ದರೂ ಕೂಡ ಇಲ್ಲಿಯವರೆಗೆ ನಿವೇಶನ ಮಂಜೂರಾತಿ ಆಗದಿರಲು ಕಾರಣವೇನು ? | ಸದರಿ ಪ್ರಕರಣಕ್ಕೆ ಸಂಬಂಧಪಟ್ಟಂತೆ ಹಕ್ಕುಪತ್ರ ವಿತರಣೆಗೆ ಜಿಲ್ಲಾಧಿಕಾರಿಗಳಿಂದ ಪ್ರಸ್ತಾವನೆ ಸ್ವೀಕೃತವಾಗಿರುವುದಿಲ್ಲ ಮತ್ತು ನಿಯಮಾನುಸಾರ ಪ್ರಸ್ತಾವನೆ ಸ್ವೀಕೃತವಾದ ಕೂಡಲೇ ಪರಿಶೀಲಿಸಿ, ಹಕ್ಕುಪತ್ರ ನೀಡಲು ಕ್ರಮವಹಿಸಲಾಗುವುದು. |
| ಇ) | ಅಲೆಮಾರಿ/ಅರೆ ಅಲೆಮಾರಿ ಸಮುದಾಯಕ್ಕೆ ಕಳೆದ ಹಲವು ವರ್ಷಗಳಿಂದ ರಾಜ್ಯ ಸರ್ಕಾರ ಹಾಗೂ ಜಿಲ್ಲಾಡಳಿತ ನಿರ್ಲಕ್ಷ ಭಾವನೆ ತೋರುತ್ತಿದ್ದು, ಈ ರೀತಿ ನಿರ್ಲಕ್ಷ ತೋರುತ್ತಿರುವ ಜಿಲ್ಲಾಡಳಿತದ ಯಾವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ? | ಸ್ಥಳೀಯರ ಆಕ್ಷೇಪಣೆಯಿಂದ ನಿವೇಶನ ಹಂಚಿಕೆ ವಿಳಂಬವಾಗಿದ್ದು, ಯಾವುದೇ ವಿಳಂಭ ಹಾಗೂ ನಿರ್ಲಕ್ಷ ತೋರಿರುವುದಿಲ್ಲ ಎಂದು ಜಿಲ್ಲಾಧಿಕಾರಿಗಳು ವರದಿ ಮಾಡಿರುತ್ತಾರೆ. |

ಸಂಖ್ಯೆ :ವಇ 88 ಹೆಚ್‌ಎಂ 2023

(ವಿ. ಸೋಮಣ್ಣ)
ವಸತಿ ಮತ್ತು ಮೂಲಸೌಲಭ್ಯ
ಅಭಿವೃದ್ಧಿ ಸಚಿವರು